ಮಂಗಳವಾರ 09-09-2025 ಬೆಂಗಳೂರು ಬೆಲೆ: 5ರೂ, 4ಪಟಗಳು ಸಂಪುಟ 01-ಸಂಚಿಕೆ 41

Digital Varthe Kannada Daily Volume 01 - Issue 41 Tuesday 09-09-2025 Price: 5/- Rs 2 Pages Bengalore

DIGITAL VARTHE

www.digitalvarthe.com
digitalvarthe@gmail.com

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

RNI:KNKAN/25/A1348

ಕನ್ನಡ ದಿನಪತ್ರಿಕೆ

## ಸಿಂಧುಘಟ್ಟ ಗ್ರಾಮ ಪಂಚಾಯತಿ ನೂತನ ಅಧ್ಯಕ್ಷರಾಗಿ ರೂಪಾಮಹಾದೇವ್ ಅವಿರೋಧ ಆಯ್ಕೆ



ಕೆ.ಆರ್.ಪೇಟೆ: ತಾಲ್ಲೂಕಿನ ಶೀಳನೆರೆ ಹೋಬಳಿಯ ಸಿಂಧುಘಟ್ಟ ಗ್ರಾಮ ಪಂಚಾಯತಿ ನೂತನ ಅಧ್ಯಕ್ಷರಾಗಿ ರೂಪಾಮಹಾದೇವ್ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಗ್ರಾಮ ಪಂಚಾಯತಿಯ ಹಿಂದಿನ ಅಧ್ಯಕ್ಷೆ ಲಾವಣ್ಯಕುಮಾರ್ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಇಂದು ಚುನಾವಣೆ ನಿಗಧಿಯಾಗಿತ್ತು. ಅಧ್ಯಕ್ಷ ಸ್ಥಾನ ಬಯಸಿ ರೂಪಮಹಾದೇವ್ ಅವರನ್ನು ಹೊರತುಪಡಿಸಿ ಉಳಿದ ಯಾವ ಸದಸ್ಯರು ನಾಮಪತ್ರ ಸಲ್ಲಿಸದೇ ಇರುವ ಕಾರಣ ರೂಪಾ ಮಹಾದೇವ್ ರವರು ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು.

ಚುನಾವಣಾಧಿಕಾರಿಯಾಗಿ ಲೋಕೋಪಯೋಗಿ ಇಲಾಖೆಯ ಎಇಇ ಬೋರಯ್ಯ ಕಾರ್ಯನಿರ್ವಹಿಸಿದರು. ಸಹ ಚುನಾವಣಾಧಿಕಾರಿಗಳಾಗಿ ತಾ.ಪಂ. ವ್ಯವಸ್ಥಾಪಕ ಅನಿಲ್ ಬಾಬು, ಪಿಡಿಓ ಕೆ.ಜೆ. ವಾಣಿ ಕರ್ತವ್ಯ ನಿರ್ವಹಣೆ ಮಾಡಿದರು. ನೂತನ ಅಧ್ಯಕ್ಷರಾಗಿ ಆಯ್ಕೆಯಾದ ರೂಪಾಮಹಾದೇವ್ ರವರನ್ನು ಉಪಾಧ್ಯಕ್ಷ ಕೆ.ಆರ್. ಸೋಮಶೇಖರ್, ಪಿಡಿಓ ಕೆ.ಜೆ.ವಾಣಿ, ಸದಸ್ಯರಾದ ದಿವ್ಯ ಗಿರೀಶ್, ಆಶಾಸೋಮಶೇಖರ್, ನಂಜಪ್ಪ, ಲಾವಣ್ಯಕುಮಾರ್, ಜ್ಯೋತಿ ನಾಗರಾಜು, ಸುಮಲತಾಚೆಲುವರಾಜು, ಎಸ್.ಸಿ.ನಾಗೇಶ್, ನವೀನ್‌ಕುಮಾರ್, ರಾಜೇಶ್ವರಿನರಸಿಂಹ, ಶಾಂಭವಿಮಂಜು ಮುಖಂಡರಾದ ಎಸ್.ಐ.ಗಿರೀಶ್, ಬೇಲದಕೆರೆ ಮರೀಗೌಡ, ಶೆಟ್ಟಿನಾಯಕನಕೊಪ್ಪಲು ಸೋಮಶೇಖರ್, ಅಂಗಡಿ ನವೀನ್, ಸೋಮಶೇಖರ್, ಕೃಷ್ಣೇಗೌಡ, ಸಚಿನ್‌ಕೃಷ್ಣ, ಉಯ್ಗೋನಹಳ್ಳಿ ಕಿಟ್ಟಿ, ಮಂಜೇಗೌಡ, ಅತ್ತಿಮಾರನಹಳ್ಳಿ ಹರೀಶ್, ಯೋಗೇಶ್, ಆನಂದ್, ಮಾರುತಿನಗರ ಹರೀಶ್, ಸೇರಿದಂತೆ ಹಲವು ಗಣ್ಯರು ಅಭಿನಂದಿಸಿದ್ದಾರೆ.

ನೂತನ ಅಧ್ಯಕ್ಷೆ ರೂಪಾಮಹಾದೇವ್ ಮಾತನಾಡಿ ನನ್ನನ್ನು ಅಧ್ಯಕ್ಷ ಸ್ಥಾನಕ್ಕೆ ಅವಿರೋಧ ಆಯ್ಕೆಯಾಗಲು ಕಾರಣಕರ್ತರಾದ ಶಾಸಕರಾದ ಹೆಚ್ ಟಿ ಮಂಜಣ್ಣ, ಹೆಚ್.ಟಿ.ಲೋಕೇಶ್ ಹಾಗೂ ಎಲ್ಲಾ ಸದಸ್ಯರುಗಳಿಗೆ ನಮ್ಮ ಪಂಚಾಯತಿ ವ್ಯಾಪ್ತಿಯ ಎಲ್ಲಾ ಮುಖಂಡರಿಗೆ, ಹಿತೈಷಿಗಳಿಗೆ ಅನಂತ ಅನಂತ ಧನ್ಯವಾದಗಳನ್ನು ಅರ್ಪಿಸುತ್ತೇನೆ. ನನ್ಗೆ ಸಿಕ್ಕಿರುವ ಅಧಿಕಾರದ ಅವಧಿಯಲ್ಲಿ ಪಕ್ಷ ಭೇದ ಮರೆತು ಎಲ್ಲಾ ಸದಸ್ಯರುಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪಂಚಾಯತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳ ಮೂಲಭೂತ ಸೌಕರ್ಯಗಳ ಬಗ್ಗೆ ಕಾಳಜಿಯನ್ನು ವಹಿಸುತ್ತೇನೆ.

ರಸ್ತೆ, ಚರಂಡಿ ಅಭಿವೃದ್ಧಿ, ಶುದ್ಧ ಕುಡಿಯುವ ನೀರು ಸರಬರಾಜು, ಬೀದಿ ದೀಪಗಳ ಅಭಿವೃದ್ಧಿ ಹೀಗೆ ಹತ್ತು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜನತೆಗೆ ಸ್ಪಂದಿಸುವ ಕೆಲಸವನ್ನು ಪ್ರಾಮಾಣಿಕವಾಗಿ ಪ್ರಯತ್ನವನ್ನು ಮಾಡುತ್ತೇನೆ ಎಂದು ಭರವಸೆ ನೀಡಿದರು.

ಚಿತ್ರಶೀರ್ಷಿಕೆ:08.ಕೆ.ಆರ್.ಪಿ-01: ಕೆ.ಆರ್.ಪೇಟೆ: ತಾಲ್ಲೂಕಿನ ಶೀಳನೆರೆ ಹೋಬಳಿಯ ಸಿಂಧುಘಟ್ಟ ಗ್ರಾಮ ಪಂಚಾಯತಿ ನೂತನ ಅಧ್ಯಕ್ಷರಾಗಿ ರೂಪಾಮಹಾದೇವ್ ಅವರು ಅವಿರೋಧವಾಗಿ ಆಯ್ಕೆಯಾಗಿದ್ದು ಇವರನ್ನು ಗ್ರಾ.ಪಂ.ಸದಸ್ಯರು ಮುಖಂಡರು ಅಭಿನಂದಿಸಿದರು.

# ಬ್ಯಾಲಟ್ ಪೇಪರ್ ಚುನಾವಣೆ ಪ್ರಶ್ನಿಸಿ ಇಸಿಗೆ ಪತ್ರ ಬರೆದ ಎನ್.ಆರ್.ರಮೇಶ್



ಬೆಂಗಳೂರು, ಸೆ.8? ಇವಿಎಂಗಳ ಬದಲು ಬ್ಯಾಲಟ್ ಪೇಪರ್‌ಗಳನ್ನು ಚುನಾವಣೆಯಲ್ಲಿ ಬಳಸಬೇಕೆಂಬ ರಾಜ್ಯ ಸರ್ಕಾರದ ಪ್ರಜಾಪ್ರಭುತ್ವ ವಿರೋಧಿ ನಿರ್ಣಯದ ವಿರುದ್ಧ ಬಿಜೆಪಿ ಮುಖಂಡ ಎನ್.ಆರ್. ರಮೇಶ್ ಅವರು ಚುನಾವಣಾ ಆಯೋಗಕ್ಕೆ ಪತ್ರ ಬರೆದಿದ್ದಾರೆ. ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಇವಿಎಂಬದಲು ಬ್ಯಾಲಟ್‌ಗಳನ್ನು ಬಳಸುವ ಬಗ್ಗೆ ನಿರ್ಣಯ ಕೈಗೊಂಡಿರುವುದನ್ನು ಅವರು ತೀವ್ರವಾಗಿ ಖಂಡಿಸಿದ್ದಾರೆ.

ಸ್ವಾತಂತ್ರ್ಯ ನಂತರದ ದಿನಗಳಿಂದ ಹಿಡಿದು ಇವಿಎಂ ಪದ್ಧತಿ ಜಾರಿಗೆ ಬರುವ ತನಕ ಎಲ್ಲ ವಿಧದ ಚುನಾವಣೆಗಳಲ್ಲಿ ಕಾಂಗ್ರೆಸ್(ಐ) ಪಕ್ಷವು ಮಾಡಬಾರದ್ದನ್ನು ಮಾಡಿ ಎಲ್ಲ ಸ್ಥಳೀಯ ಸಂಸ್ಥೆಗಳಲ್ಲಿ, ರಾಜ್ಯ ವಿಧಾನಸಭಾ ಮತ್ತು ಲೋಕಸಭಾ ಚುನಾವಣೆಗಳಲ್ಲಿ ಅಧಿಕಾರವನ್ನು ತಮ್ಮ ತೆಕ್ಕೆಗೆ ತೆಗೆದುಕೊಳ್ಳುವಲ್ಲಿ ಸಹಸ್ರಾರು ಕಾನೂನು ಬಾಹಿರ ಕಾರ್ಯಗಳನ್ನು ನಡೆಸಿರುವುದು ಈಗಾಗಲೇ ಜಗಜ್ಜಾಹೀರಾಗಿರುವ ವಿಷಯವಾಗಿದೆ. ಬ್ಯಾಲಟ್‌ಗಳ ಮೂಲಕ ಮತ ಚಲಾವಣೆ ನಡೆಯುತ್ತಿದ್ದ ಸಂದರ್ಭಗಳಲ್ಲಿ ಮತಗಟ್ಟೆ ಅಧಿಕಾರಿಗಳನ್ನು ಬೆದರಿಸಿ ಅಥವಾ ಅಂತಹ ಅಧಿಕಾರಿಗಳನ್ನು ಆಮಿಷಗಳ ಮೂಲಕ ತಮ್ಮತ್ತ ಸೆಳೆದುಕೊಂಡು ವ್ಯಾಪಕ ಪ್ರಮಾಣದ ಮಾಡುವ ಮೂಲಕ ಅಧಿಕಾರವನ್ನು ತಮ್ಮದನ್ನಾಗಿಸಿಕೊಳ್ಳುವ ಸಹಸ್ರಾರು ಕಾನೂನು ಬಾಹಿರ ಕಾರ್ಯಗಳನ್ನು ಕಾಂಗ್ರೆಸ್(ಐ) ಪಕ್ಷವು ನಡೆಸಿರುವುದು ನೂರಾರು ಸಂದರ್ಭಗಳಲ್ಲಿ ಬಹಿರಂಗಗೊಂಡಿದೆ.

ಸಮಾಜ ವಿರೋಧಿ ಶಕ್ತಿಗಳು, ರೌಡಿ ಶೀಟರ್ ಗಳು ಮತ್ತು ಪ್ರಭಾವೀ ವ್ಯಕ್ತಿಗಳ ಮೂಲಕ ಆಯಾ ಮತಗಟ್ಟೆಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಮತಗಟ್ಟೆ ಅಧಿಕಾರಿಗಳನ್ನು ಹೆದರಿಸಿ, ಬೆದರಿಸಿ ಅಥವಾ ಹಣದ ಮೂಲಕ ತಮ್ಮವರನ್ನಾಗಿಸಿಕೊಂಡು ಪ್ರತಿಯೊಂದು ಚುನಾವಣೆಗಳಲ್ಲಿ ಬೃಹತ್ ಮಟ್ಟದ ಕಾರ್ಯಗಳನ್ನು ಮಾಡುವ ನೈಪುಣ್ಯತೆಯನ್ನು ಪಡೆದಿದ್ದ ಕಾಂಗ್ರೆಸ್(ಐ) ಪಕ್ಷವು ಕೇವಲ ತನ್ನ ಇಂತಹ ಪ್ರಜಾಪ್ರಭುತ್ವ ವಿರೋಧಿ ಹಾಗೂ ಸಮಾಜ ವಿರೋಧಿ ಕಾರ್ಯಗಳಿಂದಲೇ ಅಧಿಕಾರವನ್ನು ಪಡೆಯುತ್ತಿದ್ದುದು ಎಲ್ಲರಿಗೂ ತಿಳಿದ ವಿಷಯವಾಗಿದೆ. 2001 ರಲ್ಲಿ ತಮಿಳುನಾಡು, ಕೇರಳ, ಪುದುಚೇರಿ ಮತ್ತು ಪಶ್ಚಿಮ ಬಂಗಾಳ ರಾಜ್ಯಗಳಲ್ಲಿ ನಡೆದ ವಿಧಾನಸಭಾ ಚುನಾವಣೆಗಳಲ್ಲಿ ಸಂಪೂರ್ಣವಾಗಿ ಇವಿಎಂಗಳನ್ನು ಬಳಸಿ ಮತದಾನದ ಪ್ರಕ್ರಿಯೆಗಳನ್ನು ನಡೆಸಲಾಗಿತ್ತು.

ಭಾರತದ ಮೂಲ ನಿವಾಸಿಗಳು ಮತ್ತು ಬಹುಸಂಖ್ಯಾತರ ವಿರೋಧಿ ನಿಲುವುಗಳಿಂದಾಗಿಯೇ ಕಾಂಗ್ರೆಸ್(ಐ) ಪಕ್ಷವು ತನ್ನ ಅಸ್ತಿತ್ವವನ್ನು ದೇಶದಾದ್ಯಂತ ಕಳೆದುಕೊಳ್ಳುತ್ತಿರುವುದು ಸತ್ಯವಾದರೂ ಸಹ, ತಮ್ಮ ತಪ್ಪುಗಳನ್ನು ಮರೆಮಾಚಿ ಇಸಿಐ ಗಳ ಮೇಲೆ ಗೂಬೆ ಕೂರಿಸುವ ಪ್ರಯತ್ನಕ್ಕೆ ಮುಂದಾಗಿರುವ ಆ ಪಕ್ಷದ ನಾಯಕರು ಇವಿಎಂ ಗಳ ಮೂಲಕ ಮತ ಚಲಾವಣೆಗೆ ಅವಕಾಶವಿರುವುದರಿಂದ ಮುಂದೆಂದಿಗೂ ಅಧಿಕಾರದ ಮಾತು ಮರೀಚಿಕೆಎಂಬ ಸತ್ಯ ಅವರಿಗೆ ಮನವರಿಕೆಯಾಗಿರುವ ಹಿನ್ನೆಲೆಯಲ್ಲಿ, ಈಗ ತಮ್ಮ ಹಳೆಯ ಸಮಾಜ ವಿರೋಧಿ ಕಾರ್ಯಗಳ ಮೂಲಕ ಬ್ಯಾಲಟ್‌ನಿಂದ ನಡೆಯುವ ಮತದಾನದ ಪ್ರಕ್ರಿಯೆಯಲ್ಲಿ ವ್ಯಾಪಕ ಪ್ರಮಾಣದ ಕಾರ್ಯಗಳನ್ನು ಮಾಡಿಸಿ ಪುನಃ ಅಧಿಕಾರಕ್ಕೆ ಬರುವ ಕನಸನ್ನು ಕಾಣುತ್ತಿರುವಂತೆ ಬಾಸವಾಗುತ್ತಿದೆ.

ಬ್ಯಾಲಟ್‌ಗಳ ಮೂಲಕ ನಡೆಯುವ ಚುನಾವಣೆಗಳಲ್ಲಿ ಮತ ಎಣಿಕೆ ಕಾರ್ಯ ಪಾರದರ್ಶಕವಾಗಿರುತ್ತದೆ ಎಂದು ಹೇಳುತ್ತಿರುವ ಅವರು ಚುನಾವಣೆಗಳಲ್ಲಿ ತಮ್ಮ ಗೂಂಡಾಗಿರಿ ರಾಜಕಾರಣದ ಮೂಲಕ ದೊಡ್ಡ ಮಟ್ಟದ ಷಡ್ಯಂತ್ರ ನಡೆಸಿ ತಮಗೆ ಬೇಕಾದಂತಹ ಅನುಕೂಲಕರ ಚುನಾವಣೆ ನಡೆಸಬಹುದು ಎಂಬ ಸತ್ಯವನ್ನು ಮಾತ್ರ ತಮ್ಮಲ್ಲೇ ಮರೆಮಾಚಿಕೊಳ್ಳುತ್ತಿದ್ದಾರೆ !!! ಬ್ಯಾಲಟ್‌ಗಳ ಪದ್ಧತಿಯಲ್ಲಿ ಕುಲಗೆಟ್ಟ ಮತಗಳ ಪ್ರಮಾಣ ಹೆಚ್ಚಿರುತ್ತದೆ. ಆದರೆ ಇವಿಎಂ ಬಳಕೆಯ ಪದ್ಧತಿಯಲ್ಲಿ ಇಂತಹುದಕ್ಕೆ ಅವಕಾಶವಿರುವುದಿಲ್ಲ. ಈಗಾಗಲೇ ಇವಿಎಂಗಳ ಬಗ್ಗೆ ಅನುಮಾನ ವ್ಯಕ್ತಪಡಿಸಿ, ಸರ್ವೋಚ್ಚ ನ್ಯಾಯಾಲಯ ಮತ್ತು ಹಲವು ರಾಜ್ಯಗಳ ಉಚ್ಚ ನ್ಯಾಯಾಲಯಗಳಲ್ಲಿ ದಾಖಲಾಗಿದ್ದ ಹಲವು ಪ್ರಕರಣಗಳಲ್ಲಿ ಇವಿಎಂ ಮೂಲಕ ನಡೆಸುವ ಮತದಾನವು ಅತ್ಯಂತ ಪಾರದರ್ಶಕವಾಗಿರುತ್ತದೆ ಹಾಗೂ ಯಾವುದೇ ರೀತಿಯ ಚುನಾವಣೋತ್ತರ ಅಕ್ರಮಗಳು ನಡೆಯಲು ಸಾಧ್ಯವೇ ಇಲ್ಲ ಎಂಬ ಪರಮಸತ್ಯ ಸಾಕ್ಷಿ ಸಹಿತ ರುಜುವಾತಾಗಿರುತ್ತದೆ.ಈ ಹಿನ್ನೆಲೆಯಲ್ಲಿ ಅತ್ಯಂತ ಪಾರದರ್ಶಕವಾಗಿರುವ ಮೂಲಕ ಮತದಾನ ಮಾಡುವ ಇವಿಎಂ ಪದ್ಧತಿಯನ್ನೇ ಮುಂದುವರೆಸುವ ಸಂಬಂಧ ಹಾಗೂ ವ್ಯಾಪಕ ಪ್ರಮಾಣದ ಮಾಡಲು ಅವಕಾಶವಿರುವ ಬ್ಯಾಲಟ್ ಮೂಲಕ ಮತದಾನಕ್ಕೆ ಅವಕಾಶ ಮಾಡಿಕೊಡದಿರುವ ಸಂಬಂಧ ಸೂಕ್ತ ಕ್ರಮ ತೆಗೆದುಕೊಳ್ಳಬೇಕೆಂದು ಅವರು ಪತ್ರದಲ್ಲಿ ಚುನಾವಣಾಧಿಕಾರಿಗಳನ್ನು ಆಗ್ರಹಿಸಿದ್ದಾರೆ.

## ಮದ್ದೂರಲ್ಲಿ ಕಲ್ಲು ತೂರಾಟ ಪ್ರಕರಣ :21 ಮಂದಿ ಬಂಧಿಸಿದ್ದೇವೆ ಎಂದ ಸಚಿವ ಚಲುವರಾಯಸ್ವಾಮಿ




ಬೆಂಗಳೂರು: ಮದ್ದೂರಿನಲ್ಲಿ ಗಣಪತಿ ಮೂರ್ತಿ ವಿಸರ್ಜನೆ ಮೆರವಣಿಗೆ ವೇಳೆ ನಡೆದ ಗಲಭೆ ಪ್ರಕರಣದ ಹಿನ್ನೆಲೆಯಲ್ಲಿ 21 ಜನರನ್ನು ಬಂಧಿಸಲಾಗಿದೆ ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷಿ ಸಚಿವ ಚಲುವರಾಯಸ್ವಾಮಿ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮದ್ದೂರಿನಲ್ಲಿ ನಿನ್ನೆ ಗಣಪತಿ ಮೂರ್ತಿ ಮೆರವಣಿಗೆ ನಡೆಯುವ ಸಂದರ್ಭದಲ್ಲಿ ಮಸೀದಿ ಕಡೆಯಿಂದ ಕಲ್ಲುಗಳು ಎಸೆದ ಬಗ್ಗೆ ಮಾಹಿತಿ ಇದೆ. ಈ ಬಗ್ಗೆ ವಿಚಾರಣೆ ನಡೆಸಿದ ನಂತರ ಇಪ್ಪತ್ತೊಂದು ಜನರನ್ನು ಈಗಾಗಲೇ ಬಂಧಿಸಲಾಗಿದೆ ಎಂದರು. ಯಾವ ಹಿಂದೂಗಳ ಮೇಲೂ ಕೇಸ್ ದಾಖಲಾಗಿಲ್ಲ. ಗಲಭೆ ನಡೆದ ಕೆಲವೇ ಗಂಟೆಗಳಲ್ಲಿ ತಪ್ಪಿತಸ್ಥರ ವಿರುದ್ಧ ಕ್ರಮ ತೆಗೆದುಕೊಳ್ಳಲಾಗಿದೆ. ಘಟನೆ ನಡೆದ ತಕ್ಷಣ ಅಂದರೆ, ಇಷ್ಟು ಬೇಗ ಕ್ರಮ ತೆಗೆದು ಕೊಂಡ ಪ್ರಕರಣ ಬೇರೆ ಯಾವುದೂ ಇಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಆದರೆ, ಬಿಜೆಪಿಯ ಹಾಗೂ ಕೆಲವು ಜೆಡಿಎಸ್ ನಾಯಕರು ಪ್ರಚೋದಿಸುವ ಕೆಲಸ ಮಾಡುತ್ತಿದ್ದಾರೆ. ಇನ್ನಷ್ಟು ಬಿಗಿ ಕ್ರಮಗಳನ್ನು ತೆಗೆದುಕೊಳ್ಳಲು ಹೇಳಬಹುದಿತ್ತು. ಅದನ್ನು ಬಿಟ್ಟು ಕೋಮುಗಲಭೆಗೆ ಪ್ರಚೋದನೆ ಕೊಡಬಾರದಿತ್ತು ಎಂದು ಅವರು ಬೇಸರ ವ್ಯಕ್ತಪಡಿಸಿದರು. ಮದ್ದೂರಿನಲ್ಲಿ ಹಿಂದೆ ಎಂದೂ ಈ ರೀತಿಯ ಘಟನೆ ನಡೆದಿಲ್ಲ. ಹೊರಗಡೆಯಿಂದ ಬಂದು ಯಾರೋ ಗಲಭೆ ಮಾಡಿರಬಹುದು ಎಂಬ ಬಗ್ಗೆ ವಿಚಾರಣೆ ಮಾಡುತ್ತಿದ್ದೇವೆ. ಯಾವುದೇ ಸಮಾಜದವರಾಗಿದ್ದರೂ ಅವರ ಮೇಲೆ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುತ್ತೇವೆ ಎಂದು ಹೇಳಿದರು. ಬಿಜೆಪಿ ಮತ್ತು ಜೆಡಿಎಸ್‌ನವರು ರಾಜಕೀಯವಾಗಿ ನಮನ್ನುಎದುರಿಸಾಗದೆ ಪ್ರಚೋದನೆ ಮಾಡುತ್ತಿದ್ದಾರೆ. ನಾವು ಯಾರ ಓಲೈಕೆಯನ್ನೂ ಮಾಡುತ್ತಿಲ್ಲ. ಹಾಗಿದ್ದರೆ ಏಕೆ ಇಪ್ಪತ್ತೊಂದು ಜನರ ಬಂಧನ ಮಾಡುತ್ತಿದ್ದೆವು ಎಂದು ಸಚಿವ ಚಲುವರಾಯಸ್ವಾಮಿ ಪ್ರಶ್ನಿಸಿದರು.

## ಮೆಸೇಜ್ ಓಪನ್ ಮಾಡಿ 21 ಲಕ್ಷ ರೂ. ಕಳೆದುಕೊಂಡ ವೃದ್ಧ



ಮೈಸೂರು: ಕ್ರೆಡಿಟ್ ಕಾರ್ಡ್ ಲಿಮಿಟ್ ಹೆಚ್ಚಿಸುವುದಾಗಿ ಬಂದ ಮೆಸೇಜ್ ನಂಬಿದ ವೃದ್ಧರೊಬ್ಬರು 21 ಲಕ್ಷ ಕಳೆದುಕೊಂಡ ಘಟನೆ ನಗರದಲ್ಲಿ ನಡೆದಿದೆ. ಯಾದವಗಿರಿ ವಿವೇಕಾನಂದ ರಸ್ತೆಯ ಗೌಸ್ ಹಣ ಕಳೆದುಕೊಂಡ ವೃದ್ಧರು.

ಎರಡು ದಿನಗಳ ಹಿಂದೆ ಕ್ರೆಡಿಟ್ ಕಾರ್ಡ್‌ನ ಲಿಮಿಟ್ ಹೆಚ್ಚಿಸುವುದಾಗಿ ಗೌಸ್ ಅವರ ಮೊಬೈಲ್‌ಗೆ ಎಸ್-ಎಂಎಸ್ ಬಂದಿದೆ. ಇದನ್ನು ನಂಬಿದ ಗೌಸ್ ತಮ ಇಮೇಲ್, ಕ್ರೆಡಿಟ್ ಕಾರ್ಡ್ ನಂಬರ್, ಜನ ದಿನಾಂಕದ ವಿವರಗಳನ್ನು ಒದಗಿಸಿದ್ದಾರೆ. ಅದೇ ಸಮಯದಲ್ಲಿ ಹೆಚ್‌ಡಿಎಫ್‌ಸಿ ಕ್ರೆಡಿಟ್ ಕಾರ್ಡ್‌ನಿಂದ 1,00,485 ರೂ. ಡ್ರಾ ಮಾಡಿದ್ದಾರೆ.

ತಕ್ಷಣವೇ ಹೆಚ್‌ಡಿಎಫ್‌ಸಿ ಬ್ಯಾಂಕ್ ಕಾರ್ಡ್ ಬ್ಲಾಕ್ ಮಾಡಿಸಿದ್ದಾರೆ. ಆದರೆ ಕಿಲಾಡಿಗಳು ಐಡಿಎಫ್‌ಸಿ ಬ್ಯಾಂಕ್ ಖಾತೆಯಲ್ಲಿದ್ದ 20 ಲಕ್ಷ ಹಣವನ್ನೂ ಸಹ ಡ್ರಾ ಮಾಡಿದ್ದಾರೆ.

ವಂಚನೆಗೊಳಗಾದ ವೃದ್ಧರು ಸೆನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಮೈಸೂರಿನಲ್ಲಿ ಪದೇ ಪದೇ ಸೈಬರ್ ವಂಚನೆ ಪ್ರಕರಣಗಳು ನಡೆಯುತ್ತಲೇ ಇದ್ದು, ಸಾರ್ವಜನಿಕರು ಎಚ್ಚರಿಕೆಯಿಂದಿರುವಂತೆ ಪೊಲೀಸರು ಪದೇ ಪದೇ ಜಾಗೃತಿ ಮೂಡಿಸುತ್ತಿದ್ದಾರೆ. ಆದರೂ ಸಹ ವಂಚಕರ ಜಾಲಕ್ಕೆ ಸಿಲುಕಿ ಅಮಾಯಕರು ಲಕ್ಷಗಟ್ಟಲೆ ಹಣ ಕಳೆದುಕೊಳ್ಳುತ್ತಿದ್ದಾರೆ. ತಮ ಮೊಬೈಲ್‌ಗಳಿಗೆ ಬರುವ ಯಾವುದೇ ಸಂದೇಶಗಳನ್ನು, ಆ?ಯಪ್‌ಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬೇಡಿ.

ಬ್ಯಾಂಕ್‌ನವರು ಯಾವುದೇ ಕಾರಣಕ್ಕೂ ಮೆಸೇಜ್ ಕಳುಹಿಸುವುದಿಲ್ಲ. ಒಂದು ವೇಳೆ ಮೆಸೇಜ್ ಬಂದರೂ ಕೂಡ ತಮ ಖಾತೆ ಹೊಂದಿರುವ ಬ್ಯಾಂಕ್‌ಗಳಿಗೆ ಭೇಟಿ ನೀಡಿ ಪರಿಶೀಲಿಸಿಕೊಳ್ಳುವಂತೆ ಪೊಲೀಸರು ತಿಳಿಸಿದ್ದಾರೆ. ವಿದ್ಯಾವಂತರೇ ವಂಚಕರ ಜಾಲಕ್ಕೆ ಸಿಲುಕಿ ಹಣ ಕಳೆದುಕೊಳ್ಳುತ್ತಿರುವುದು ವಿಪರ್ಯಾಸ. ಇನ್ನು ಮುಂದಾದರೂ ಜನರು ಯಾವುದೇ ಕಾರಣಕ್ಕೂ ಮೊಬೈಲ್‌ಗಳಲ್ಲಿ ಬರುವ ವಾಟ್ಸಾಪ್ ಲಿಂಕ್‌ಗಳು, ಮೆಸೇಜ್‌ಗಳನ್ನು ಓಪನ್ ಮಾಡಿ ಡೌನ್‌ಲೋಡ್ ಮಾಡಿಕೊಳ್ಳದಂತೆ ತಿಳಿಸಲಾಗಿದೆ.

# ಹಿಂದೂಗಳ ಮೇಲೆ ಪೊಲೀಸರ ಅಟ್ಟಹಾಸ :ಅಶ್ವತ್ಥ ನಾರಾಯಣ ಆಕ್ರೋಶ

ಬೆಂಗಳೂರು: ಮಂಡ್ಯ ಜಿಲ್ಲೆ ಮದ್ದೂರು ಪಟ್ಟಣದಲ್ಲಿ ಗಣಪತಿ ವಿಸರ್ಜನೆ ವೇಳೆ ಅನ್ಯಕೋಮಿನವರು ಕಲ್ಲು ಎಸೆದು ಹಲ್ಲೆ ನಡೆಸಿದ್ದರೂ ಪೊಲೀಸರು ಮಾತ್ರ ಹಿಂದೂಗಳ ಮೇಲೆ ಲಾಠಿಚಾರ್ಜ್ ನಡೆಸಿ ಪೌರುಷ ತೋರಿದ್ದಾರೆ ಎಂದು ಮಾಜಿ ಸಚಿವ ಅಶ್ವತ್ಥ ನಾರಾಯಣ ಸರ್ಕಾರದ ವಿರುದ್ಧ ಕೆಂಡ ಕಾರಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿಜವಾಗಿಯೂ ನಿಮಗೆ ಅಷ್ಟೊಂದು ಆಕ್ರೋಶವಿದ್ದರೆ ಗಣಪತಿ ಮೆರವಣಿಗೆ ಸಂದರ್ಭದಲ್ಲಿ ಕಲ್ಲು ಎಸೆದ ಮತಾಂಧರರ ಮೇಲೆ ಲಾಠಿಚಾರ್ಜ್ ನಡೆಸಿ ಪೌರುಷ ತೋರಿಸಿ, ಶಾಂತಿಯುತವಾಗಿ ಮೆರವಣಿಗೆ ನಡೆಸುತ್ತಿದ್ದವರ ಮೇಲೆ ಮಹಿಳೆಯರು ಮತ್ತು ಮಕ್ಕಳ ಮೇಲೆ ಒಣ ಪೌರುಷ ತೋರಿಸಿರುವುದು ಬೇಡ ಎಂದು ಎಚ್ಚರಿಕೆ ಕೊಟ್ಟರು. ನಾವು ಏನು ಬೇಕಾದರೂ ಮಾಡಬಹುದೆಂಬ ಮನಸ್ಥಿತಿಯಲ್ಲಿರುವ ಒಂದು ಸಮುದಾಯ ಮಚ್ಚು, ಲಾಂಗು ಹಿಡಿದು ಅಟ್ಟಹಾಸ ಮೆರೆಯುತ್ತಿದ್ದಾರೆ. ಶಾಂತಿಯುತವಾಗಿ ನಡೆಯುತ್ತಿದ್ದ ಮೆರವಣಿಗೆ ಮೇಲೆ ಕಲ್ಲು ಎಸೆಯುವ ಅಗತ್ಯವಾದರೂ ಏನಿತ್ತು? ಪೊಲೀಸ್ ಇಲಾಖೆ ಸರ್ಕಾರದ ಓಲೈಕೆಗೆ ಸೀಮಿತವಾಗಿದೆ. ಪೋಸ್ಟಿಂಗ್‌ಗೋಸ್ಕರ ಇಲಾಖೆ ಓಲೈಕೆಗಿಳಿದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಉದ್ದೇಶಪೂರಕವಾಗಿ ಕಲ್ಲು ಎಸೆದವರ ಮೇಲೆ ಕಾನೂನು ಕ್ರಮ ಜರುಗಿಸದ ಪೊಲೀಸರು ಹಿಂದೂಗಳ ಮೇಲೆ ಲಾಠಿಚಾರ್ಜ್ ನಡೆಸಿ ಸರ್ಕಾರದಿಂದ ಶಹಬ್ಬಾಸ್‌ಗಿರಿ ಪಡೆಯುವ ಯತ್ನದಲ್ಲಿದ್ದಾರೆ. ಮುನ್ನೆಚ್ಚರಿಕೆ ಕ್ರಮವಾಗಿ ಹೆಚ್ಚುವರಿ ಭದ್ರತಾಪಡೆಗಳನ್ನು ಏಕೆ ನಿಯೋಜಿಸಲಿಲ್ಲ. ಈ ವ್ಯವಸ್ಥೆ ಮೇಲೆ ಜನರು ವಿಶ್ವಾಸವನ್ನು ಕಳೆದುಕೊಂಡಿದ್ದಾರೆ. ಅದರಲ್ಲೂ ಪೊಲೀಸರ ಮೇಲಂತೂ ಮೊದಲೇ ವಿಶ್ವಾಸವಿಲ್ಲ. ರಾಜ್ಯದಲ್ಲಿ ಪೊಲೀಸ್ ವ್ಯವಸ್ಥೆ



ಸಂಪೂರ್ಣವಾಗಿ ಸತ್ತು ಹೋಗಿದೆ. ಅಮಾಯಕರು ಬಲಿಯಾಗುತ್ತಿದ್ದಾರೆ. ಇದಕ್ಕೆ ಯಾರು ಹೊಣೆ? ಎಂದು ಪ್ರಶ್ನಿಸಿದರು.

ಜಿಲ್ಲಾ ಉಸ್ತುವಾರಿ ಹಾಗೂ ಕೃಷಿ ಸಚಿವ ಚಲುವರಾಯಸ್ವಾಮಿ ವಿರುದ್ಧವೂ ವಾಗ್ದಾಳಿ ನಡೆಸಿದ ಅಶ್ವತ್ಥ ನಾರಾಯಣ, ಗಲಭೆಗೆ ಬಿಜೆಪಿ, ಜೆಡಿಎಸ್ ಕಾರಣವೆಂದು ಯಾವ ಆಧಾರದ ಮೇಲೆ ಹೇಳಿದ್ದಾರೆ. ನಾವು ಗಲಭೆ ನಡೆಸಿ ಎಂದು ಕುಮಕ್ಕು ಕೊಟ್ಟಿದ್ದೇವೆಯೇ?, ನಿಮಗೆ ಬುದ್ಧಿ ಸರಿ ಇದ್ದಿದ್ದರೆ ಈ ರೀತಿ ಮಾತನಾಡುತ್ತಿರಲಿಲ್ಲ. ಯಾವ ಆಧಾರದಲ್ಲಿ ಮಾತನ್ನಾಡಿದ್ದೀರಿ ಎಂದು ತರಾಟೆಗೆ ತೆಗೆದುಕೊಂಡರು. ಗಣೇಶ ಹಬ್ಬ ಹಿಂದೂಗಳ ಹಬ್ಬ. ಇದನ್ನು ನಾವು ಶ್ರದ್ಧೆ, ಭಕ್ತಿಯಿಂದ ಆಚರಣೆ ಮಾಡುತ್ತೇವೆ. ಈ ಹಬ್ಬಕ್ಕೆ ಕುಮಕ್ಕು ಕೊಡುವುದರಲ್ಲಿ ಅರ್ಥವಿದೆಯೇ?, ಚಲುವರಾಯಸ್ವಾಮಿ ಮೊದಲು ದುರಹಂಕಾರದ ಮಾತುಗಳನ್ನಾಡುವುದನ್ನು ನಿಲ್ಲಿಸಬೇಕು. ಈ ಹಿಂದೆ ಮೂಲೆಗೆ ಸೇರಿದ್ದಿರಿ. ಈಗ ಇದೇ ರೀತಿ ಮಾತನಾಡಿದರೆ ಮತ್ತೆ ಮೂಲೆಗುಂಪಾಗಲಿದ್ದೀರಿ ಎಂದು ಎಚ್ಚರಿಕೆ ಕೊಟ್ಟರು.

ನೀವು ಜಿಲ್ಲಾ ಸಚಿವರಾಗಿ ಪರಿಸ್ಥಿತಿಯನ್ನು ನಿಭಾಯಿಸಲು ಮಾತನಾಡಬೇಕು. ಎಲ್ಲರನ್ನೂ ಕರೆಸಿ ಮಾತನಾಡುವುದನ್ನು ಬಿಟ್ಟು ಬೇರೆ ಪಕ್ಷಗಳ ಮೇಲೆ ಗೂಬೆ ಕೂರಿಸುವುದು, ದುರಹಂಕಾರದ ಮಾತುಗಳನ್ನಾಡುವುದು ಸರಿಯಲ್ಲ ಎಂದು ಆಕ್ಷೇಪಿಸಿದರು. ಬೇರೆ ಜಿಲ್ಲೆಗಳಿಂದ ಕಿಡಿಗೇಡಿಗಳು ಬಂದು ಕಲ್ಲೆಸೆದಿದ್ದಾರೆ ಎಂದರೆ ಗುಪ್ತಚರ ವಿಭಾಗ, ಪೊಲೀಸರು ಏನು ಮಾಡುತ್ತಿದ್ದರು. ಕಾಂಗ್ರೆಸ್ ಸರ್ಕಾರ ಬಂದರೆ ನಾವು ಏನು ಬೇಕಾದರೂ ಮಾಡಿ ಜಯಿಸಿಕೊಳ್ಳಬಹುದು ಎಂಬ ಮನಸ್ಥಿತಿಯವರೇ ಈ ಕೃತ್ಯ ನಡೆಸಿದ್ದಾರೆಂದು ದೂರಿದರು. ಪೊಲೀಸರ ಮೇಲೆ ಹಲ್ಲೆ ನಡೆಸುತ್ತಾರೆಂದರೆ ಇವರು ಏನು ಬೇಕಾದರೂ ಮಾಡುವುದಕ್ಕೆ ಹೇಸುವುದಿಲ್ಲ. ಕಾಂಗ್ರೆಸ್ ಸರ್ಕಾರ ಇದ್ದಾಗ ಹೊರ ಜಿಲ್ಲೆಗಳಿಂದ ಇಂಥ ಮತಾಂಧರು ಬಂದು ಗಲಭೆ ಸೃಷ್ಟಿಸುತ್ತಾರೆ. ಇದಕ್ಕೆಲ್ಲಾ ಪೊಲೀಸ್ ವೈಫಲ್ಯವೇ ಕಾರಣ ಎಂದು ದೂರಿದರು. ಗಲಭೆಕೋರರ ವಿರುದ್ಧ ಸರ್ಕಾರ ನಿರ್ದಾಕ್ಷಿಣ್ಯವಾಗಿ ಪ್ರಕರಣ ದಾಖಲಿಸಿ ಕಾನೂನು ಕ್ರಮ ಜರುಗಿಸಬೇಕು. ಇದರಲ್ಲಿ ಲಾಭ, ನಷ್ಟದ ಲೆಕ್ಕ ಹಾಕದೇ ತಕ್ಷಣವೇ ತಪ್ಪಿತಸ್ಥ ಆರೋಪಿಗಳನ್ನು ಬಂಧಿಸಿ ಜೈಲಿಗೆ ಅಟ್ಟಿದರೆ ಮುಂದಿನ ದಿನಗಳಲ್ಲಿ ಗಲಭೆ ಸೃಷ್ಟಿಸುವವರಿಗೆ ಎಚ್ಚರಿಕೆ ಸಂದೇಶವಾಗುತ್ತದೆ ಎಂದು ಅಶ್ವತ್ಥನಾರಾಯಣ ಹೇಳಿದರು.

## ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ ಜಿಲ್ಲೆಯ101 ಪಂಚಾಯಿತಿಗಳಲ್ಲಿ ಮಾದರಿ ಶಾಲೆ: ಗುಣಮಟ್ಟದ ಶಿಕ್ಷಣಕ್ಕೆ ಮೊದಲ ಆದ್ಯತೆ

# ಎಸ್ಸೆಸ್ಸೆಲ್ಸಿ–ಪಿಯುಸಿಯಲ್ಲಿ ಜಿಲ್ಲೆಯನ್ನು ಮೊದಲ ಸ್ಥಾನಕ್ಕೆ ಏರಿಸಿ: ಸಚಿವ ಮುನಿಯಪ್ಪ

**ಬೆಂಗಳೂರು ಗ್ರಾಮಾಂತರ ಜಿಲ್ಲೆ: ಮುಂಬರುವ ಎಸ್ಸೆಸ್ಸೆಲ್ಸಿ, ಪಿಯುಸಿ ಪರೀಕ್ಷೆ ಫಲಿತಾಂಶದಲ್ಲಿ ಜಿಲ್ಲೆಯನ್ನು ಮೊದಲ ಸ್ಥಾನಕ್ಕೆ ತರಲು ಶಿಕ್ಷಕರು ಹೆಚ್ಚು ಕಾರ್ಯಪ್ರವೃತ್ತರಾಗಿ ಎಂದು ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರು ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್ ಮುನಿಯಪ್ಪ ಅವರು ಹೇಳಿದರು.**

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ ಹಾಗೂ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ದೇವನಹಳ್ಳಿ ಟೌನ್ ನಲ್ಲಿರುವ ಡಾ. ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ನಂತರ ಭಾರತರತ್ನ ಡಾ. ಸರ್ವೆಪಲ್ಲಿ ರಾಧಾಕೃಷ್ಣನ್ ಮತ್ತು ಭಾರತದ ಮೊದಲ ಮಹಿಳಾ ಶಿಕ್ಷಕಿ ಸಾವಿತ್ರಿ ಬಾಯಿ ಫುಲೆ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ನಂತರ ಮಾತನಾಡಿದರು.

ರಾಜ್ಯದಲ್ಲಿ ಪ್ರತಿ ವರ್ಷ ಎಸ್ಸೆಸ್ಸೆಲ್ಸಿ, ಪಿಯುಸಿ ಫಲಿತಾಂಶದಲ್ಲಿ ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ ಜಿಲ್ಲೆಗಳು ಪ್ರಥಮ ಸ್ಥಾನದಲ್ಲಿರುತ್ತವೆ. ಶಿಕ್ಷಣದಲ್ಲಿ ಮುಂದುವರೆದ ಜಿಲ್ಲೆಗಳಾಗಿವೆ. ಆ ಸಾಲಿಗೆ ನಮ್ಮ ಜಿಲ್ಲೆಯು ಸೇರಬೇಕು. ನಮ್ಮ ಜಿಲ್ಲೆಯು ಕೂಡ ಶಿಕ್ಷಣದಲ್ಲಿ ಮುಂದುವರೆಯಬೇಕು. ಈ ನಿಟ್ಟಿನಲ್ಲಿ ಶಿಕ್ಷಕರು ಕೆಲಸ ಮಾಡಬೇಕು. ಶಿಕ್ಷಣ–ಕ್ಕೆ ಸರ್ಕಾರದಿಂದ ಬೇಕಾದ ಎಲ್ಲಾ ರೀತಿಯ ನೆರವು ನೀಡಲು ನಾವು ಸಾದಾ ಸಿದ್ದರಿದ್ದೇವೆ. ಜಿಲ್ಲೆಯನ್ನು ಎಸ್ಸೆಸ್ಸೆಲ್ಸಿ ಪಿಯುಸಿಯಲ್ಲಿ ಮೊದಲ ಸ್ಥಾನಕ್ಕೆ ಕೊಂಡೊಯ್ಯುವ ಕೆಲಸ ಶಿಕ್ಷಕರಾದ ನಿಮ್ಮೆಲ್ಲರ ಮೇಲಿದೆ ಎಂದು ಹೇಳಿದರು. ಅಂದಿನ ಕಾಲದಲ್ಲಿ ಶಿಸ್ತಿನ ಪಾಠ ಈಗಿನ ಕಾಲಕ್ಕೆ ಮಾದರಿ, ಎಲ್ಲರೂ ಒಂದಲ್ಲ ಒಂದು ದಿನ ನಿವೃತ್ತಿ ಹೊಂದುವವರೇ ಆದ–'ರೆ ಅವರು ನೀಡಿರುವ ಕೊಡುಗೆಗಳು, ಗುರುತುಗಳು ಅಜರಾಮರವಾಗಿರಬೇಕು.

ಸರ್ಕಾರಿ ಶಾಲೆಗಳಲ್ಲಿ ಮಕ್ಕಳು ವಿದ್ಯಾಭ್ಯಾಸ ಮಾಡಿ ಹಲವಾರು ಉನ್ನತ ಮಟ್ಟದ ಹುದ್ದೆಗಳನ್ನು ಅಲಂಕರಿಸಿದ್ದಾರೆ. ಅಗ್ರಗಣ್ಯ ದೇಶಗಳ ಜೊತೆಗೆ ನಮ್ಮ ದೇಶ ಬೆಳೆಯಬೇಕು. ಸಿಇಟಿ, ನೀಟ್ ನಂತಹ ಪರೀಕ್ಷೆಗಳಲ್ಲಿ ನಮ್ಮ ಸರ್ಕಾರಿ ಶಾಲೆ ಮಕ್ಕಳು ಬೆಳೆಯಬೇಕು. ಗುಣಮಟ್ಟದ ಶಿಕ್ಷಣವನ್ನು ಮಕ್ಕಳಿಗೆ ನೀಡಿ ದೇಶದ ಅಭಿವೃದ್ಧಿಗೆ ಅವರನ್ನು ಬೆಳೆಯುವಂತೆ ಮಾಡುವುದು ಶಿಕ್ಷಕರ ಕೈಯಲ್ಲಿದೆ ಎಂದರು. ರಾಜ್ಯಾದ್ಯಂತ 500 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಅಭಿವೃದ್ಧಿ ಪಡಿಸಲಾಗುವುದು. ಜಿಲ್ಲೆಯಲ್ಲಿ 4 ರಿಂದ 5 ಪಬ್ಲಿಕ್ ಶಾಲೆ, ಜೊತೆಗೆ 101 ಗ್ರಾಮ ಪಂಚಾಯಿತಿಗಳ ಕೇಂದ್ರ ಸ್ಥಾನದಲ್ಲಿ ಸಿ.ಎಸ್.ಆರ್ ಅನುದಾನದಡಿ



ಸರ್ಕಾರಿ ಮಾದರಿ ಶಾಲೆಗಳನ್ನು ಅಭಿವೃದ್ಧಿ ಪಡಿಸಲು ಈಗಾಗಲೇ ಸಿದ್ಧತೆ ಆರಂಭವಾಗಿದೆ.

ಗುಣಮಟ್ಟದ ಶಿಕ್ಷಣದ ಜೊತೆಗೆ ಆಧುನಿಕ ಮೂಲಭೂತ ಸೌಲಭ್ಯಗಳನ್ನು ಒಳಗೊಂಡಂತೆ ಕಾನ್ವೆಂಟ್ ಮಾದರಿಯಲ್ಲಿ ಅಭಿವೃದ್ಧಿಪಡಿಸಲಾಗುವುದು ಎಂದರು. ಚಿಕ್ಕಬಳ್ಳಾಪುರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಕೋಡಿ ರಂಗಪ್ಪ ಅವರು ವಿಶೇಷ ಉಪನ್ಯಾಸ ನೀಡಿ ಭಾರತ ಅತ್ಯಂತ ಶ್ರೀಮಂತ ಸಾಂಸ್ಕೃತಿಕ ಪರಂಪರೆ ಹೊಂದಿರುವ ದೇಶ. ಅಂದಿನ ಕಾಲದಲ್ಲಿ ಅಕ್ಷರ ಸಂಸ್ಕೃತಿ ಎಲ್ಲರಿಗೂ ಸಿಗುತ್ತಿರಲಿಲ್ಲ, ಅಂತಹ ಸಮಯದಲ್ಲಿದ್ದ ಅನೇಕ ಸಂಪ್ರದಾಯಗಳು ಹಾಗೂ ಮೂಢನಂಬಿಕೆಗಳನ್ನು ಹೋಗಲಾಡಿಸಲು ಸಮಾಜದಲ್ಲಿನ ಮಹಾನ್ ವ್ಯಕ್ತಿಗಳಾದ ಬುದ್ಧ, ಬಸವಣ್ಣ, ಜ್ಯೋತಿಭಾ ಫುಲೆ, ಸಾವಿತ್ರಿಬಾಯಿ ಫುಲೆ, ಡಾ.ಬಿ.ಆರ್ ಅಂಬೇಡ್ಕರ್ ಅವರು ಈ ರೀತಿಯ ಅನಿಷ್ಟ ಪದ್ಧತಿಗಳನ್ನು ಧಿಕ್ಕರಿಸಿ ಶಿಕ್ಷಣ ಕ್ರಾಂತಿಗೆ ನಾಂದಿ ಹಾಡಿದರು.

ನಮ್ಮ ದೇಶವು ಮುನ್ನೆಲೆಗೆ ಬರಬೇಕೆಂದರೆ ಮೊದಲು ಶಿಕ್ಷಣ ಕ್ಷೇತ್ರದಲ್ಲಿ ಅಚ್ಚುಕಟ್ಟಾದ ಕೆಲಸ ಮಾಡಬೇಕು. ಆದ್ದರಿಂದ ಕಡ್ಡಾಯ ಶಿಕ್ಷಣ ನೀಡಬೇಕು ಎಂಬುದನ್ನು ಶಾಸನ ಬದ್ದವಾಗಿ ಡಾ.ಬಿ.ಆರ್ ಅಂಬೇಡ್ಕರ್ ಅವರು ಸಂವಿಧಾನದಲ್ಲಿ 45 ನೇ ವಿಧಿಯಲ್ಲಿ ಪರಿಚಯಿಸಿದರು. ಈ ರೀತಿಯ ಕಾನೂನುಗಳನ್ನು ಜಾರಿಗೆ ತಂದು ಮಹಿಳೆಯರಿಗೆ, ದಲಿತರಿಗೆ, ಕಾರ್ಮಿಕರಿಗೆ ಹಾಗೂ ಹಿಂದುಳಿದ ವರ್ಗದವರಿಗೆ ಶಿಕ್ಷಣ ಸಿಕ್ಕಂತಾಯಿತು. ಹಾಗೇ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರು ಶಿಕ್ಷಣ ಕ್ಷೇತ್ರದಲ್ಲಿ ಅನೇಕ ಸಾಧನೆ ಮಾಡಿದವರು, ಆದ್ದರಿಂದ ಸತತ ಎರಡು ಬಾರಿ ರಾಷ್ಟ್ರಪತಿಯಾಗಿ ಆಯ್ಕೆಯಾಗುತ್ತಾರೆ. ಆದ್ದರಿಂದ ಶಿಕ್ಷಕರು ಇವರ ಆದರ್ಶಗಳನ್ನು ಪಾಲನೆ ಮಾಡಬೇಕು.

ಶಿಕ್ಷಕರ ದಿನಾಚರಣೆ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರ ಆಶಯಗಳಿಗೆ ನಿಜವಾದ ಅರ್ಥ ಸಿಗಬೇಕೆಂದರೆ ಸರ್ಕಾರಿ ಶಾಲೆಗಳ ಮೇಲಿನ ವಿಶ್ವಾಸವನ್ನು ಕಳೆದುಕೊಂಡಿರುವ ಪೋಷಕರಿಗೆ ನಾವೆಲ್ಲರೂ ಸೇರಿ ಸರ್ಕಾರಿ ಶಾಲೆಗಳ ಮೇಲಿರುವ ತಪ್ಪು ಕಲ್ಪನೆಯನ್ನು ಹೋಗಲಾಡಿಸಬೇಕು. ಕಳೆದ ಮೂರು ನಾಲ್ಕು ವರ್ಷಗಳಿಂದ ಸರ್ಕಾರಿ ಶಾಲೆಗಳ ದಾಖಲಾತಿಯಲ್ಲಿ ಕುಸಿಯುತ್ತಿದೆ. ಎಷ್ಟೋ ಸರ್ಕಾರಿ ಶಾಲೆಯಲ್ಲಿ ಬೆರಳೆಣಿಕೆಯಷ್ಟು ಮಕ್ಕಳಿದ್ದರೆ, ಇನ್ನೂ ಕೆಲವು ಶಾಲೆಗಳಲ್ಲಿ ಒಂದನೇ ತರಗತಿಗೆ ಒಂದು ಮಗು ಕೂಡ ಇಲ್ಲದಂತಾಗಿದೆ. ನಾವು ಮುಖ್ಯವಾಗಿ ಮಕ್ಕಳ ಕಲಿಯುವ ಕ್ರಮವನ್ನು ಅಧ್ಯಯನ ಮಾಡಿ ಬದಲಾಯಿಸಬೇಕು. ಈ ಕಾರ್ಯವನ್ನು ಕೇವಲ ಶಿಕ್ಷಕರು ಮಾತ್ರ ಮಾಡಬೇಕು.

ನೀವು ಶಾಲೆಗೆ ಬರುವ ಮಕ್ಕಳನ್ನು ನಿಮ್ಮ ಮಕ್ಕಳು ಎಂಬ ಭಾವನೆಯಿಂದ ಶಿಕ್ಷಣವನ್ನು ಧಾರೆಯರಿಯಬೇಕು ಅದು ಒಂದಲ್ಲ ಒಂದು ದಿನ ಉತ್ತಮ ಫಲ ನೀಡುತ್ತದೆ, ಅಂದು ಮಕ್ಕಳು ನಿಮ್ಮನ್ನು ಪೂಜಿಸುತ್ತಾರೆ ಎಂದು ತಿಳಿಸಿದರು. ಜಿಲ್ಲೆಯ 15 ಶಿಕ್ಷಕರಿಗೆ ಅತ್ಯುತ್ತಮ ಪ್ರಶಸ್ತಿ, ಒಬ್ಬರಿಗೆ ರಾಜ್ಯ ಪ್ರಶಸ್ತಿ, ನಿವೃತ್ತ ಶಿಕ್ಷಕರನ್ನು ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಜಿಲ್ಲಾ ಅಧ್ಯಕ್ಷ ರಾಜಣ್ಣ, ಪುರಸಭೆ ಅಧ್ಯಕ್ಷ ಮುನಿಕೃಷ್ಣ, ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರಾದ ಮಂಜುನಾಥ್, ಉಪವಿಭಾಗಾಧಿಕಾರಿ ದುರ್ಗ ಶ್ರೀ, ಜಿಪಂ ಉಪಕಾರ್ಯದರ್ಶಿ ಶಿವಕುಮಾರ್, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಬೈಲಾಂಜಿನಪ್ಪ, ದೇವನಹಳ್ಳಿ ತಹಶೀಲ್ದಾರ್ ಅನಿಲ್, ಇ.ಓ ಶ್ರೀನಾಥ್ ಗೌಡ, ಕ್ಷೇತ್ರ ಶಿಕ್ಷಣಾಧಿಕಾರಿ ಲಲಿತಮ್ಮ ಸೇರಿದಂತೆ ಜಿಲ್ಲಾಮಟ್ಟದ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳು, ಶಿಕ್ಷಕರ ವೃಂದ, ಸಾರ್ವಜನಿಕರು ಭಾಗವಹಿಸಿದ್ದರು.

# 4.50 ಕೋಟಿಯ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ

ಔರಾದ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಶ್ರಮ: ಶಾಸಕ ಪ್ರಭು ಚವ್ಹಾಣ ಔರದ:ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಸೋಮವಾರ ಔರಾದ ವಿಧಾನಸಭಾ ಕ್ಷೇತ್ರದಲ್ಲಿ ಸಂಚರಿಸಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ ಮತ್ತು ಭೂಮಿ ಪೂಜೆ ನೆರವೇರಿಸಿದರು.

ಕಮಲನಗರದಲ್ಲಿ 2 ಕೋಟಿ ವೆಚ್ಚದ ಅಗ್ನಿಶಾಮಕ ಕಛೇರಿ, ಮದನೂರ ಹಾಗೂ ಚಾಂದೋರಿಯಲ್ಲಿ 50 ಲಕ್ಷ ವೆಚ್ಚದ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸೋರಳ್ಳಿ ತಾಂಡಾದಲ್ಲಿ 55 ಲಕ್ಷ, ಶಂಕರ ತಾಂಡಾದಲ್ಲಿ 55.60 ಲಕ್ಷ, ಜೀರ್ಗಾ(ಕೆ)ನಲ್ಲಿ 13.90 ಲಕ್ಷ ಮೊತ್ತದ ಹೆಚ್ಚುವರಿ ತರಗತಿ ಕೋಣೆಗಳ ನಿರ್ಮಾಣ, ಮಹಾದೇವ ಪಾಟಿ ತಾಂಡಾದಲ್ಲಿ 6.50 ಲಕ್ಷ, ರಾಜೇಂದ್ರ ನಾಯಕ್ ತಾಂಡಾದಲ್ಲಿ 6 ಲಕ್ಷ ಮೊತ್ತದ ಸಿಸಿ ರಸ್ತೆಗಳು, ಸಂಗಮ್ ನಲ್ಲಿ 14.50 ಲಕ್ಷ ವೆಚ್ಚದ ಶಾಲಾ ದುರಸ್ತಿ ಕಾಮಗಾರಿ ಹಾಗೂ ಮುರ್ಕಿ ವಾಡಿಯಲ್ಲಿ 5.90 ಲಕ್ಷದ ಸಿಸಿ ಚರಂಡಿ ನಿರ್ಮಾಣ ಸೇರಿದಂತೆ ಸುಮಾರು 4.50 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾ–ರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.



ಈ ವೇಳೆ ಮಾತನಾಡಿ, ಎಲ್ಲ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗಾಗಿ ಗುಣಮಟ್ಟದಿಂದ ಪೂರ್ಣಗೊಳಿಸಬೇಕು. ಸಾರ್ವಜನಿಕರ ಹಿತದೃಷ್ಟಿಯಿಂದ ಅತಿ ತುರ್ತಾಗಿರುವ ಕಾಮಗಾರಿಗಳನ್ನು ಕೈಗೊಂಡಿದ್ದು, ಗುಣಮಟ್ಟದ ವಿಷಯದಲ್ಲಿ ಯಾವುದೇ ಕಾರಣಕ್ಕೂ ಲೋಪವಾಗಬಾರದು ಎಂದು ಗುತ್ತಿಗೆದಾರರು ಮತ್ತು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಔರಾದ(ಬಿ) ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ, ಮುಖಂಡರಾದ ಕಿರಣ ಪಾಟೀಲ ಹಕ್ಯಾಳ, ಬಸವರಾಜ ಪಾಟೀಲ ಕಮಲನಗರ, ಮಲ್ಲಿಕಾರ್ಜುನ ದಾನಾ, ನಾಗನಾಥ ಚಿಕ್ಲೆ, ಶಿವಾಜಿರಾವ ಪಾಟೀಲ ಮುಂಗನಾಳ, ಅನೀಲ ಬಿರಾದಾರ, ಬಾಬುರಾವ ತೋರ್ಣಾವಾಡಿ, ಶಿವರಾಜ ಅಲ್ಮಾಜೆ, ಶಿವು ಝುಲ್ಪೆ, ಶಿವಕುಮಾರ ವಡ್ಡೆ, ನಾಗೇಶ ಪತ್ರೆ, ರಂಗರಾವ ಜಾಧವ, ಅಶೋಕ ಹಲಮಂಡಗೆ, ಪ್ರಕಾಶ ಮೇತ್ರೆ, ಪ್ರಕಾಶ ಜೀರ್ಗೆ, ಮಲ್ಲಪ್ಪ ನೇಳಗೆ, ಶಿವರಾಜ ಖಳೂರೆ, ಮಾದಪ್ಪ ಗಂಗಾ ಸೇರಿದಂತೆ ಇತರರಿದ್ದರು.

# ಪಳವಳ್ಳಿ ಗ್ರಾಮಪಂಚಾಯಿತಿ ಅಧಿಕಾರಿಗಳ ಅಂದದರ್ಬಾರ್

ಪಾವಗಡ: ತಾಲ್ಲೂಕಿನ ಪಳವಳ್ಳಿ ಗ್ರಾಮ ಪಂಚಾಯಿತಿಯ ಪಿಡಿಒ, ಸಿಬ್ಬಂದಿಗಳನ್ನು ಯಾರೂ ಮಾಹಿತಿ ಕೇಳುವಂತಿಲ್ಲ. ಇಲ್ಲಿ ಅವರದ್ದೇ ಆಟ, ಇದು ಪ್ರಜಾಪ್ರಭುತ್ವಕ್ಕೆ ಒಳಪಟ್ಟಿದೆಯೇ ಎಂಬ ಅನುಮಾನ ಸಾರ್ವಜನಿಕರಲ್ಲಿ ಮೂಡದಿರದು.

ಇಲ್ಲಿನ ಪಿಡಿಒ ಈ ಹಿಂದೆ ಕೆಲ ಸಮಸ್ಯೆಗಳಿಂದ ಬೇರೆಡೆಗೆ ವರ್ಗಾವಣೆ ಆಗಿದ್ದರು, ಇದೀಗ ರಾಜಕೀಯ ಪ್ರಭಾವ ಬಳಸಿ ಇದೇ ಸ್ಥಳಕ್ಕೆ ಬಂದಿದ್ದಾರೆ. ನಡಾವಳಿ ಪುಸ್ತಕದ ಬಗ್ಗೆ ಮಾಹಿತಿ ಕೇಳಿದ ಕೂಡಲೆ ಕೆಲವರನ್ನು ಕಚೇರಿಗೆ ಕರೆಸಿಕೊಂಡು ಇಲ್ಲ ಸಲ್ಲದ ಆರೋಪ ಮಾಡಿ ಹಲ್ಲೆಗೆ ಯತ್ನಿಸಿದ್ದಾರೆ. ಏನಿದು ನಡಾವಳಿ ಕಥೆ–ವ್ಯಥೆ ಎಂದು ವಿಚಾರಿಸಲಾಗಿ, ಇಲ್ಲಿನ ನಡಾವಳಿ ಪುಸ್ತಕವನ್ನು ಪಿಡಿಒ ಮನೆಗೆ ಕೊಂಡೊಯ್ದಿದ್ದಾರೆ. ಸಭಾ ನಡಾವಳಿ ಒಪ್ಪಿಗೆ ಪಡೆಯದೆ ಮನ ಬಂದಂತೆ ನೂತನ ಬಡಾವಣೆಯ ನಿವೇಶನಗಳ ಖಾತೆಗಳನ್ನು ಮಾಡಿಕೊಟ್ಟು ಹಣ ದೇಪಿದ್ದಾರೆ.

ಇದೀಗ ಸಿಕ್ಕಿ ಹಾಕಿಕೊಳ್ಳುವ ಭಯದಿಂದ ಇಂತಹ ನಾಟಕ ಆಡುತ್ತಿದ್ದಾರೆ ಎಂಬ ಆರೋಪಗಳು ಗ್ರಾಮಸ್ಥರಿಂದ ಕೇಳಿ ಬರುತ್ತಿವೆ. ಇದೇ ವಿಚಾರವಾಗಿ ಇ ಒ ಉತ್ತಮ್ ಅವರು ಕಚೇರಿಗೆ ಭೇಟಿ ನೀಡಿ ಎಚ್ಚರಿಕೆ ಕೊಟ್ಟು ಬಂದಿದ್ದಾರೆ. ಆದರೂ ಇವರ ಛಾಳಿ ಬದಲಾಗಿಲ್ಲ. ಅವ್ಯವಹಾರ ಮಾಡಿ ಅಮಾನತ್ತು ಆಗುವ ಭಯದಿಂದ ಮಾಹಿತಿ ಕೇಳುವವರ ಮೇಲೆ ಗುಂಡಾಗಳಿಂದ ಬೆಧರಿಕೆ ಹಾಕಿಸುತ್ತಿದ್ದಾರೆ. ಉನ್ನತ ಅಧಿಕಾರಿಗಳಿಗೂ ಮಾಮೂಲು ಹೋಗಿದೆಯೇ ಎಂಬ ಅನುಮಾನ ಸಾರ್ವಜನಿಕರನ್ನು ಕಾಡುತ್ತಿದೆ. ಸಂಬಂಧಿಸಿದವರು ಈ ಕೂಡಲೆ ನಡಾವಳಿ ಪುಸ್ತಕದ ಬಗ್ಗೆ ತನಿಖೆ ನಡೆಸಿ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂಬುದು ಸಾರ್ವಜನಿಕರ ಒತ್ತಾಯ.




# ಹೊಸಕೋಟೆ ಟೌನ್ ಬ್ಯಾಂಕ್ 112ನೇ ವರ್ಷದ ವಾರ್ಷಿಕ ಸಭೆ

ಹೊಸಕೋಟೆ: ಹೊಸಕೋಟೆ ನಗರದಲ್ಲಿರುವ ದಿ–ಟೌನ್–ಕೊಟಪರೇಟಿವ್ ಬ್ಯಾಂಕಿನ 2024–25ನೇ ಸಾಲಿನ ಸರ್ವ ಸದಸ್ಯರ 112ನೇ ವಾರ್ಷಿಕ ಮಹಾಸಭೆ ಇಂದು ಹೊಸಕೋಟೆ ನಗರದ ಸೂಲಿಬೆಲೆ ರಸ್ತೆಯಲ್ಲಿರುವ ಹೆಚ್.ಜೆ.ಎಸ್.ಎಸ್. ಕನ್ವೇಷನ್ ಹಾಲಲ್ಲಿ ನಡೆಯಿತು.

ವಾರ್ಷಿಕ ಸಭೆಯನ್ನು ಉದ್ದೇಶಿಸಿ ಆಡಳಿತಧಿಕಾರಿ ಮಾಧವರೆಡ್ಡಿ ಮಾತನಾಡಿ ಆಡಳಿತ ಮಂಡಳಿಯ ಅಧ್ಯಕ್ಷತೆಯಲ್ಲಿ ನಡೆಯಬೇಕಿದ್ದ ಸಭೆ ಹಲವು ಕಾರಣಾಂತರಗಳಿಂದ ನ್ಯಾಯಾಲಯದಲ್ಲಿರುವ ಕಾರಣ ನನ್ನನ್ನು ಆಡಳಿತ ಅಧಿಕಾರಿಯನ್ನಾಗಿ ನೇಮಿಸಿದ್ದಾರೆ ಅದ ಕಾರಣ 112ನೇ ವಾರ್ಷಿಕ ಸಭೆಯ ಅಧ್ಯಕ್ಷತೆಯನ್ನು ವಹಿಸಿಕೊಳ್ಳುವ ಅವಕಾಶ ನನಗೆ ಒದಗಿ ಬಂದಿದೆಇಂದು ನಡೆದ ಸಭೆ ಯಶಸ್ವಿಯಾಗಿ ನಡೆದಿದ್ದು ಈ ವರ್ಷದ ಬ್ಯಾಂಕಿನ ನಿವ್ವಳ ಲಾಭ 6.88.880. ಬಂದಿದೆ.

ವಿಶೇಷವೆಂದರೆ ಕರ್ನಾಟಕ ರಾಜ್ಯದಲ್ಲಿ ಹಲವಾರು ಬ್ಯಾಂಕುಗಳಿವೆ ಅದರಲ್ಲಿ ಕೆಲವೆ ಕೆಲವುಬ್ಯಾಂಕುಗಳು ಮಾತ್ರ ಎನ್.ಪಿಎ ಜಿರೊ ಅಗಿವೆ ಅದರಲ್ಲಿ ನಮ್ಮ ಬ್ಯಾಂಕು ಸಹ ಸೇರಿದ್ದು ನನಗೆ ಹೇಳಲು ಹೆಮ್ಮೆ ಎನ್ನಿಸುತ್ತದೆ



2001ರಲ್ಲಿ ಇಂದು ಸೂಸೈಟಿ ವಿಸ್ತಾರವಾಗಿ ಬೆಳೆದು ಹೊಸಕೋಟೆ ಅಲ್ಲದೆ ಮಾಲೂರು, ಚಿಂತಾಮ ಣಿ,ಶೀಗೆಹಳ್ಳಿಯಲ್ಲಿ ಬ್ರಾಂಚುಗಳಾಗಿ ವಿಸ್ತಾರಗೊಂಡಿದೆ ಇದಕ್ಕೆ ಮೂಲ ಕಾರಣ ಸದಸ್ಯರು ಹಾಗೂ ಬ್ಯಾಂಕಿನಲ್ಲಿ ಡಿಪೋಜಿಟ್ ಇಟ್ಟಿರುವ ಮತ್ತೆ ಸಾಲ ಮರು ಪಾವತಿ ಮಾಡಿರುವಂತದ್ದು 4 ತಿಂಗಳಿಂದ ಬ್ಯಾಂಕಿನ ಬೆಳವಣಿಗೆಯನ್ನು ನಾನು ನೋಡುತ್ತಿದ್ದೇನೆ ಜೊತೆಗೆ ಸಿಬ್ಬಂದಿಗಳು ಸಹ ಉತ್ತಮ ರೀತಿಯಲ್ಲಿ ಸಹಕಾರ ನೀಡುತ್ತಿದ್ದಾರೆ.
ಅದ್ದರಿಂದ ಉತ್ತಮ, ಸ್ಥಿತಿಯಲ್ಲಿ ಬ್ಯಾಂಕ್ ನಡೆದುಕೊಂಡು ಬರುತ್ತಿದೆ ಕಟ್ಟಡಕ್ಕೆ ಸಂಬಂದಿಸಿದಂತೆ ಕ್ರಮ ವೈಸುವೆ ಕೆಲವೊಂದು ಆಡಳಿತ ಮಂಡಲಿ ಏನು ಮಾಡಲು ಆಗಲ್ಲ ಅದನ್ನು ಬೋರ್ ಬಂದ ನಂತರ ಮಾಡುತ್ತದೆ ಇನ್ನು ಕೆಲವೆ ತಿಂಗಳುಗಳಲ್ಲಿ ನ್ಯಾಯಾಲಯ ತೀಮಾನದಂತೆ ಆಡಳಿತ ಮಂಡಳಿ ಅಧಿಕಾರ ವಹಿಸಿಕೊಳ್ಳಲಿದೆ ಮತ್ತೊಂದು ವಿಚಾರ ಎಂದರೆ ಬ್ಯಾಂಕಿನಲ್ಲಿ ಸೇವೆ ಸಲ್ಲಿಸಿ ನಿವೃತ್ತಿಗೊಂಡ ನೌಕರರನ್ನು ಕರೆಸಿ ಅವರಿಗೆ ಸನ್ಮಾನ ಮಾಡಿದ್ದು ನಿಜಕ್ಕೂ ಸಂತೋಷವಾಗಿದೆ.

ಎಲ್ಲರ ಅನುಮತಿ ಮೇರೆಗೆ ಈ ಕಾರ್ಯಕ್ರಮದಲ್ಲಿ ಹಮ್ಮಿಕೊಳ್ಳಲಾಗಿದೆ ಈ ಸಭೆಗೆ ಸಹಕರಿಸಿದ ಎಲ್ಲಾ ಸದಸ್ಯರುಗಳು ಸಿಬ್ಬಂದಿಗಳಿಗೂ ಧನ್ಯವಾದಗಳನ್ನು ಸಲ್ಲಿಸುತ್ತೇನೆ ಎಂದರುಕಾರ್ಯಕ್ರಮದಲ್ಲಿ ಆಡಳಿತಧಿಕಾರಿ ಮಾಧವರೆಡ್ಡಿ ಬ್ಯಾಂಜಿನ ಪ್ರಧಾನ ವ್ಯವಸ್ಥಾಪಕ ಬಿ.ನಾಗರಾಜ್,ಮಾಜಿ ಅಧ್ಯಕ್ಷರುಗಳಾದ ನಟ–ರಾಜ್,ಕುಳ್ಳನಾಗರಾಜ್,ಶೌರತ್. ಗುಲ್ಜರ್ ಅಹ್ಮದ್. ಅಪ್ಸರ್. ನವೀನ್. ಸೋಮಶೇಖರ್. ಕೆ.ನಾಗರಾಜ್,,ಉದಯ್,ಜಿ ಬ್ಯಾಂಕ್ ಸಿಬ್ಬಂದಿ ಸೇರಿದಂತೆ ಇತರೆ ಮುಖಂಡರುಗಳು ಹಾಜರಿದ್ದರು.

# ಸಂಯೋಗ ಕಲಾ ಶಾಲೆಯ ಅರ್ಥಪೂರ್ಣ ವಾರ್ಷಿಕೋತ್ಸವ

ಬೆಂಗಳೂರು: ರಾಜಾಜಿನಗರದ ಸಂಯೋಗ ಕಲಾ ಶಾಲೆ ತನ್ನ ಆರನೆಯ ವಾರ್ಷಿಕೋತ್ಸವವನ್ನು ಮಲ್ಲೇಶ್ವರದ ಸೇವಾ ಸದನದಲ್ಲಿ ವಿಜೃಂಭಣೆಯಿಂದ ಆಚರಿಸಿತು. ಸಂಸ್ಥೆಯ ಮುಖ್ಯಸ್ಥೆ ಜ್ಯೋತಿ ಭಿಡೆ ಅವರ ತಾಯಿ ಶ್ರೀಮತಿ ಸಾವಿತ್ರಮ್ಮ ಮತ್ತು ಇತರ ಮುಖ್ಯ ಅತಿಥಿಗಳು ದೀಪ ಬೆಳಗಿಸಿ ಉದ್ಘಾಟಿಸಿದರು. ಕೇವಲ ನಾಲ್ಕು ವರ್ಷದ ಮಕ್ಕಳಿಂದ ಹಿರಿಯರವರೆಗೆ ಇರುವ ಜ್ಯೋತಿ ಅವರ ಶಿಷ್ಯವರ್ಗ, ತಾವು ಕಲಿತಿ–ರುವ ಸಂಗೀತವನ್ನು ಪ್ರದರ್ಶಿಸಿದರು.

ಮುಖ್ಯ ಅತಿಥಿಗಳಾಗಿ ಅನನ್ಯ ಸಂಸ್ಥೆಯ ಡಾ. ಆರ್.ವಿ. ರಾಘವೇಂದ್ರ, ವಿದುಷಿಗಳಾದ ಡಾ. ರಾಗಿಣಿ ಸನತ್ ಮತ್ತು ಆರ್. ಲಲಿತಾರವರು ಮಾತನಾಡಿ ಮಕ್ಕಳಿಗೆ ಪ್ರೋತ್ಸಾಹದಾಯಕ ಹಿತವಚನಗಳನ್ನು ನೀಡಿದರು. ನಂತರ ನಡೆದ ಭರತನಾಟ್ಯ ಕಾರ್ಯಕ್ರಮದಲ್ಲಿ ರಶ್ಮಿ ಹೆಗಡೆ ಅವರ ಶಿಷ್ಯರು ಪ್ರಸ್ತುತಪಡಿಸಿದ ರಂಜನಿ ಮಾಲ, ಶ್ರೀ ಜಯದೇವ ವಿರಚಿತ ದಶಾವತಾರದ ರಚನೆ ಮತ್ತು ಕೃಷ್ಣನ ಕುರಿತ ರಚನೆಯು ಸಭಾಂಗಣದಲ್ಲಿ ತುಂಬಿದ್ದ ಪ್ರೇಕ್ಷಕರಿಂದ ಮೆಚ್ಚುಗೆ ಪಡೆಯಿತು. ಕಡೆಯದಾಗಿ ಈ ಹಿಂದೆ ವಿ.ಆರ್ ಲಲಿತಾ ಅವರು ನಡೆಸಿದ್ದ ಶ್ರೀ ತ್ಯಾಗರಾಜರ ಪಂಚರತ್ನ ಕೃತಿಗಳ ಕಾರ್ಯಗಾರದಲ್ಲಿ ಭಾಗವಹಿಸಿದ ಇಪ್ಪತ್ತೈದಕ್ಕೂ ಹೆಚ್ಚು ವಿದ್ಯಾರ್ಥಿಗಳು ಆರಭಿ ರಾಗದ ಸಾಧಿಂಚನೆ ಮತ್ತು ಶ್ರೀ ರಾಗದ ಎಂದರೋ ಮಹಾನುಭಾವಲು ಕೃತಿಗಳನ್ನು ಸುಶ್ರಾವ್ಯವಾಗಿ ಹಾಡಿದರು. ಪಕ್ಕವಾದ್ಯಗಳಲ್ಲಿ ಎಸ್ ಶಶಿಧರ್ (ಪಿಟೀಲು), ಎನ್. ಎಸ್. ಕೃಷ್ಣಪ್ರಸಾದ್ (ಮೃದಂಗ), ಪರಶುರಾಮ್ (ಕೀ–ಬೋರ್ಡ್), ದೇವಕಿಚಂದ್ರ (ರಿದಂ ಪ್ಯಾಡ್) ಮತ್ತು ಪುಟ್ಟರಾಜು (ತಬಲಾ) ಅವರು ಒಳ್ಳೆಯ ಸಾಥ್ ನೀಡಿದರು. ಸಂಸ್ಥೆಯು ಇನ್ನೂ ಹೆಚ್ಚು ಶಿಷ್ಯರನ್ನು ತಯಾರು ಮಾಡಿ ಸಮಾಜಕ್ಕೆ ಉತ್ತಮ ಕೊಡುಗೆಯನ್ನು ನೀಡಲಿ ಎಂದು ಎಲ್ಲ ಪ್ರೇಕ್ಷಕರು ಹರಸಿದರು.




Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.